## ಕರ್ನಾಟಕ ಸರಕಾರದ ನಡುವಳಿಕೆಗಳು

ವಿಷಯ:- ಬಾಗಲಕೋಟ ಜಿಲ್ಲೆಯ ಬದಾಮಿ ತಾಲೂಕಿನ ಕೋಟೆಕಲ್ ಗ್ರಾಮದಲ್ಲಿ ಮಲಪ್ರಬಾ ಎಡದಂಡೆ ಕಾಲುವೆಯ 55ನೇ ಹಂಚಿಕೆಯ ಕಿ.ಮೀ. 11-12 ಮತ್ತು 13 ಕಾಲುವೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸುತ್ತಿಕೊಳ್ಳುತ್ತಿರುವ ಪ್ರಕರಣಗಳಿಗೆ ಪುನರವಸತಿ ಮತ್ತು ಪುನರವ್ಯವಸ್ಥೆಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಓದಲಾಗಿದೆ: 1} ಭೂಸ್ವಾಧೀನ ಕಾಯ್ದೆ 2013ರ ಕಲಂ 11(1) ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ದಿ: 28-05-2015

2} ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3} ವಿಶೇಷ ಜಿಲ್ಲಾಧಿಕಾರಿಗಳು, (ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ) ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿರವರು ಇವರ ಪತ್ರ ಸಂಖ್ಯೆ ಸಿ.ಆರ್-2/15-16 ದಿನಾಂಕ: 31-10-2015.

-000-

ಆದೇಶ ಸಂ:ಮವ್ಯ/ಕಂಇ/ಪುಮ/ಸಿಆರ್-12/2015-16/32 ದಿನಾಂಕ:30-11-2015.

ವಿಶೇಷ ಜಿಲ್ಲಾಧಿಕಾರಿಗಳು, (ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ) ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಬಾಗಲಕೋಟ ಜಿಲ್ಲೆಯ ಬದಾಮಿ ತಾಲೂಕಿನ ಕೋಟೆಕಲ್ ಗ್ರಾಮದಲ್ಲಿ ಮಲಪ್ರಬಾ ಎಡದಂಡೆ ಕಾಲುವೆಯ 55ನೇ ಹಂಚಿಕೆಯ ಕಿ.ಮೀ. 11-12 ಮತ್ತು 13 ಕಾಲುವೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸುತ್ತಿಕೊಳ್ಳುತ್ತಿರುವ ಪ್ರಕರಣಗಳಿಗೆ ಪುನರವಸತಿ ಮತ್ತು ಪುನರವ್ಯವಸ್ಥೆಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು ಒಟ್ಟು 08ಎ28ಗುಂ ಕ್ಷೇತ್ರಕ್ಕೆ ನೂತನ ಕಾಯ್ದೆಯ ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಮಲಪ್ರಬಾ ಯೋಜನೆ ನಂ. 3, ಬಾಗಲಕೋಟ ಇವರನ್ನು ಈ ಯೋಜನೆಗೆ ಕಾರ್ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಕಡಿಮೆ ಇರುವುದರಿಂದ ಅನ್ವಯಿಸುವುದಿಲ್ಲ.

ನೂತನ ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಒಟ್ಟು ಕ್ಷೇತ್ರ 08ಎ28ಗುಂ ಕ್ಷೇತ್ರದಲ್ಲಿ ಒಟ್ಟು ಒಂದು ಕುಟುಂಬವು ಭೂಮಿಯನ್ನು ಕಳೆದುಕೊಳ್ಳುತ್ತಿದ್ದು, ಅದರಲ್ಲಿ ಭೂ ಹಿಡುವಳಿಕ್ಕಿಂತ ಬಹುಪಾಲ ಭೂಮಿಯನ್ನು ಕಳೆದುಕೊಳ್ಳುತ್ತಿರುವುದಿಲ್ಲ. ಹಾಗೂ ಯಾವುದೇ ಕುಟುಂಬವು ಜೀವನೋಪಾಯಕ್ಕೆ ನಷ್ಟ ಹೊಂದುವುದಿಲ್ಲ ಎಂಬುವುದನ್ನು ವಿಶೇಷ ಜಿಲ್ಲಾಧಿಕಾರಿಗಳು, (ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ) ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರು ಕೂಲಂಕುಷವಾಗಿ ಪರಿಶೀಲಿಸಿ ನೂತನ ಕಾಯ್ದೆರಡಿ ಕಲಂ 16(6)ರಡಿ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಕರಡು ಯಾದಿಯನ್ನು ತಯಾರಿಸಿ ದೃಢಪಡಿಸಿಕೊಂಡಿದ್ದಾರೆ.

ವಿಶೇಷ ಜಿಲ್ಲಾಧಿಕಾರಿಗಳು, (ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ) ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ ಇವರು ತಯಾರಿಸಿರುವ ಯಾದಿಯನ್ನು ಶಿಫಾರಸ್ಸುಗಳನ್ನು ಆಧರಿಸಿ, ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಪುನರ್‌ವ್ಯವಸ್ಥೆ ಯೋಜನೆಯ ಪ್ರಸ್ತಾವನೆಯನ್ನು ನೂತನ ಕಾಯ್ದೆ ಕಲಂ 18ರಡಿ ಅನುಮೋದಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಆಯುಕ್ತರು,
ಪುಪು ಮತ್ತು ಭೂಸ್ವಾಧೀನ, ಕೃಮೇಯೋ,
ಹಾಗೂ ಪದನಿಮಿತ್ತ ಸರಕಾರದ ಕಾರ್ಯದರ್ಶಿಗಳು,
ಕರ್ನಾಟಕ ಸರಕಾರ, ಕಂದಾಯ ಇಲಾಖೆ,
ನವನಗರ, ಬಾಗಲಕೋಟ.

ಇವರಿಗೆ:

1) ಜಿಲ್ಲಾಧಿಕಾರಿಗಳು ಬಾಗಲಕೋಟ ಜಿಲ್ಲೆ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
2) ವಿಶೇಷ ಜಿಲ್ಲಾಧಿಕಾರಿಗಳು, (ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್‌ನಿರ್ಮಾಣ) ಬೃಹತ್ ನೀರಾವರಿ ಯೋಜನೆಗಳು, ಬೆಳಗಾವಿ
3) ವಿಶೇಷ ಭೂಸ್ವಾಧೀನಾಧಿಕಾರಿಗಳು, ಮಲಪ್ರಭಾ ಯೋಜನೆ ನಂ. 3, ಬಾಗಲಕೋಟ ಇವರಿಗೆ ಸೂಕ್ತ ಕ್ರಮಕ್ಕಾಗಿ
6) ಉಪ ವಿಭಾಗಾಧಿಕಾರಿಗಳು, ಉಪ-ವಿಭಾಗ, ಬಾಗಲಕೋಟ ಇವರಿಗೆ ಮಾಹಿತಿಗಾಗಿ.
7) ತಹಶೀಲ್ದಾರರು ಬದಾಮಿ ತಾಲೂಕ ಬದಾಮಿ ಇವರ ಮಾಹಿತಿಗಾಗಿ.
8) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕೋಟೆಕಲ್, ತಾಲೂಕ ಬದಾಮಿ ಇವರಿಗೆ.
9) Web site: www.bagalkot.nic.in/ukp. ಅಂತರಜಾಲದಲ್ಲಿ ಅಳವಡಿಸಲು ಸಿಸ್ಟಂ ಮ್ಯಾನೇಜರ್, ಕಂಪ್ಯೂಟರ್ ವಿಭಾಗ, ಪು ಮತ್ತು ಪು, ಕೃಮೇಯೋ, ನವನಗರ, ಬಾಗಲಕೋಟ ಇವರಿಗೆ.